ಅ) ಈಗಾಗಲೇ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? ಬಾಕಿ ಹಣವನ್ನು ಎಂದು ಬಿಡುಗಡೆ ಮಾಡಲಾಗುವುದು?

ಶ್ರೀ ಮೀರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು) :—

ಅ) 1997-98ನೇ ಸಾಲಿನಲ್ಲಿ ರೂ. 20.30 ಕೋಟಿ ಅನುದಾನವನ್ನು ಬಿಡುಗಡೆ ಮಾಡಿದೆ. 1998-99ನೇ ಸಾಲಿನಲ್ಲಿ ರೂ. 15.24 ಕೋಟಿ ಅನುದಾನವನ್ನು ಹುಬ್ಬಳ್ಳಿ - ಧಾರವಾಡ ಮಹಾನಗರ ಪಾಲಿಕೆಗೆ ಬಿಡುಗಡೆ ಮಾಡಲು ಸರ್ಕಾರ ನಿರ್ಧರಿಸಿದೆ.

ಆ) ಹುಬ್ಬಳ್ಳಿ-ಧಾರವಾಡ ಮಹಾನಗರಪಾಲಿಕೆಗೆ ಅನುದಾನ, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಬಾಕಿ ಪಾವತಿ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಬಾಕಿ ಪಾವತಿಗಾಗಿ ಈಗಾಗಲೇ ಫೆಬ್ರವರಿ 99ರ ಅಂತ್ಯವರೆಗೆ ಒಟ್ಟು ರೂ. 16.42 ಕೋಟಿ ಅನುದಾನವನ್ನು ಬಿಡುಗಡೆಗೊಳಿಸಿದೆ.

ಹುಬ್ಬಳ್ಳಿ ವಿದ್ಯಾನಗರದಲ್ಲಿ ರಂಗಮಂದಿರ ನಿರ್ಮಾಣ.

831(1276) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :—ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ವಿದ್ಯಾನಗರದಲ್ಲಿ ರಂಗಮಂದಿರ ನಿರ್ಮಿಸುವ ಪ್ರಸ್ತಾವನೆ ಏನಾದರೂ ಸರ್ಕಾರದ ಮುಂದಿದೆಯೋ? ಹಾಗಿದ್ದಲ್ಲಿ ಅದಕ್ಕೆ ತಗಲುವ ವೆಚ್ಚವೆಷ್ಟು?

ಆ) ಇದಕ್ಕಾಗಿ ಕೇಂದ್ರ ಸರ್ಕಾರದಿಂದ ಅನುದಾನ ಏನಾದರೂ ಬಿಡುಗಡೆ ಆಗಿದೆಯೋ? ಹಾಗಿದ್ದಲ್ಲಿ ಅದರ ಅನುದಾನ ಎಷ್ಟು? ಎಂದಿನಿಂದ ಈ ಕಟ್ಟಡ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು? (ವಿವರಗಳನ್ನು ಒದಗಿಸುವುದು)

ಶ್ರೀ ಮೀರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು) :—

ಅ) ಇದೆ.

ರೂ. 475.00 ಲಕ್ಷಗಳು

ಆ) ಈ ಯೋಜನೆಯ ಪೈಕಿ ಮ್ಯೂಜಿಯಮ್ ನಿರ್ಮಿಸಲು ಕೇಂದ್ರ ಸರ್ಕಾರದಿಂದ ಒಟ್ಟು ರೂ.59.615 ಲಕ್ಷ ಅನುದಾನ ಮಂಜೂರು ಆಗಿದೆ. ಇದರಲ್ಲಿ ಈಗಾಗಲೇ ದಿ: 12-3-1998ರಂದು ರೂ. 40 ಲಕ್ಷ ಬಿಡುಗಡೆ ಮಾಡಿದೆ. ಯೋಜನೆಯ ಮೊದಲನೆ ಹಂತದಲ್ಲಿ ಮ್ಯೂಜಿಯಮ್ ಹಾಗೂ ಆರ್ಟ್‌ಗ್ಯಾಲರಿ ನಿರ್ಮಿಸಲು ಟೆಂಡರ್ ಕರೆಯಲಾಗಿದೆ. ಆದಷ್ಟು ಶೀಘ್ರ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

ಸಂತೇಮಾರನಹಳ್ಳಿ ಕ್ಷೇತ್ರಕ್ಕೆ ಕುಡಿಯುವ ನೀರಿನ ಯೋಜನೆ.

833(1225) ಶ್ರೀ ಎ.ಆರ್. ಕೃಷ್ಣಮೂರ್ತಿ (ಸಂತೇಮಾರನಹಳ್ಳಿ) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕಾವೇರಿ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಯಿಂದ ಬಿಟ್ಟುಹೋಗಿರುವ ಕಾವುದವಾಡಿ ಬಸವಟ್ಟಿ, ಹೆಗ್ಗವಾಡಿಪುರ ಮತ್ತು ದೇಶವಳ್ಳಿ ಗ್ರಾಮಗಳಿಗೆ ಕಾವೇರಿ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಿ ಕೊಡುವುದಾಗಿ ಸದನದಲ್ಲಿ ನೀಡಿದ ಭರವಸೆಯನ್ನು ಅನುಷ್ಠಾನಗೊಳಿಸಲಾಗಿದೆಯೇ?

2) ಹಾಗಿದ್ದಲ್ಲಿ ಸದರಿ ಯೋಜನೆಯನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ? ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಎಂ.ಎಸ್. ಪಾಟೀಲ್ (ನಗರಾಭಿವೃದ್ಧಿ ಸಚಿವರು) :—

1. ಸದನದಲ್ಲಿ ನೀಡಿದ ಭರವಸೆಯಂತೆ ಕಾವೇರಿ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಯಿಂದ ಬಿಟ್ಟು ಹೋಗಿರುವ ಕಾವುದವಾಡಿ, ಬಸವಟ್ಟಿ, ಹೆಗ್ಗವಾಡಿಪುರ ಮತ್ತು ದೇಶವಳ್ಳಿ ಗ್ರಾಮಗಳಿಗೆ, ಚಾಮರಾಜನಗರ ಪಟ್ಟಣ ಮತ್ತು ಮಾರ್ಗಮಧ್ಯದ 23 ಹಳ್ಳಿಗಳಿಗೆ ಮಂಜೂರಾಗಿರುವ ನೀರು ಸರಬರಾಜು ಯೋಜನೆಯಿಂದ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

2. ಈ ಯೋಜನೆಯನ್ನು ಸೆಪ್ಟೆಂಬರ್ 1999ಕ್ಕೆ ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು.

835(374) ಶ್ರೀ ಕುಂಬ್ಳೆ ಸುಂದರ್‌ರಾವ್ (ಸುರತ್ಕಲ್) :— ಮಾನ್ಯ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು? ಅವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಸದರಿ ಹಾಸ್ಟೆಲುಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಪಾಠವನ್ನು ಹೇಳಿಕೊಡಲು ನಿಯೋಜಿಸಿರುವ ನಿವೃತ್ತಿ ಅಧ್ಯಾಪಕರಿಗೆ ಕೊಡುವ ಗೌರವಧನ ಮಾಹೆಯಾನ 100.00 ರೂ.ಗಳಿದ್ದು ಅದು ತೀರಾ ಕಡಿಮೆ ಎಂಬ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ?